9 ಈ ಕೆಳಕಂಡ ಖಾಲಿ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಭರ್ತಿ ಮಾಡಲು ಆರ್ಥಿಕ ಇಲಾಖೆ ಅನುಮತಿ ನೀಡಿದ್ದು, ಹೈದ್ರಾಬಾದ್-ಕರ್ನಾಟಕ ಭಾಗದ ಮೀಸಲಾಗಿ ನಿಯಮಗಳ ಬಗ್ಗೆ ಆದೇಶ ಬಂದ ತಕ್ಷಣ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕ್ರ ಸಂ	ಹುದ್ದೆ	ಭರ್ತಿ ಮಾಡುವ ಸಂಖ್ಯೆ
1	ವಾಹನ ಚಾಲಕರು	318
2	ಗ್ರೂಪ್ ಸಿ ವೃಂದದ ಅರೆವೈದ್ಯಕೀಯ ಹುದ್ದೆಗಳು	450
3	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ	331
4	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ	145
5	ಹಿರಿಯ ಪ್ರಯೋಗ ಶಾಲಾ ಟೆಕ್ನಾಲಾಜಿಸ್ಟ್	87
	ಒಟ್ಟು	1331

ಕೆ.ಎಸ್.ಆರ್ ಟಿ.ಸಿ. ಬಸ್ ನಿಲ್ದಾಣ ಕಾಮಗಾರಿ

445(828); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಕೆ.ಎಸ್.ಆರ್.ಟಿ.ಸಿ. ಬಸ್ ನಿಲ್ದಾಣದ ಆವರಣದ ಗೋಡೆ ಹಾಗೂ ರಸ್ತೆ ನಿರ್ಮಾಣದ ಟೆಂಡರ ಆಗಿದ್ದರೂ ಇದುವರೆಗೂ ಕಾಮಗಾರಿ ಪ್ರಾರಂಭವಾಗದೇ ಇರಲು ಕಾರಣಗಳೇನು? (ವಿವರ ಒದಗಿಸುವುದು)

ಆ) ಯಾವಾಗ ಕಾಮಗಾರಿ ಪ್ರಾರಂಭಿಸಲಾಗುವುದು?

ಇ) ರಾಯಭಾಗದಿಂದ ಬೆಂಗಳೂರು ಹಾಗೂ ಶಿರಡಿ ಪ್ರಯಾಣಿಕರ ಅನುಕೂಲಕ್ಕಾಗಿ ಐರಾವತ ವೋಲ್ವೋ ಬಸ್ ಓಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ?

ಶ್ರೀ ರಾಮಲಿಂಗಾರೆಡ್ಡಿ (ಮಾನ್ಯ ಸಾರಿಗೆ ಸಚಿವರು)

ಅ)

- ಬೆಳಗಾವಿ ಜಿಲ್ಲೆ ರಾಯಬಾಗ ತಾಲ್ಲೂಕಿನ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣದ ಆವರಣದ ಗೋಡೆ ನಿರ್ಮಾಣದ ಕಾಮಗಾರಿಗೆ 2009–10ನೇ ಸಾಲಿನಲ್ಲಿ ಟೆಂಡರ್ ಮಂಜೂರು ಆಗಿದ್ದು, ಮೂರು ಕಡೆಗೆ ಅಂದರೆ ಶೇಕಡಾ 75 ರಷ್ಟು ಕಾಮಗಾರಿ ಪೂರ್ಣಗೊಂಡಿರುತ್ತದೆ. ಇನ್ನುಳಿದ ಒಂದು ಭಾಗದಲ್ಲಿ ಗೋಡೆ ನಿರ್ಮಾಣದ ಸಮಯದಲ್ಲಿ, ಪಕ್ಕದ ನಿವಾಸಿಗಳು ದಿ:28–10–2010 ರಂದು ಮಾನ್ಯ ಸಿವಿಲ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ರಾಯಬಾಗ, ಇವರಿಂದ ನಿರ್ಮಾಣ ಕಾರ್ಯ ಸ್ಥಗಿತಗೊಳಿಸುವಂತೆ ತಡೆಯಾಜ್ಞೆಯನ್ನು ತಂದಿರುತ್ತಾರೆ. ಪ್ರಸ್ತುತ ಸದರಿ ಪ್ರಕರಣವು ವಿಚಾರಣೆ ಹಂತದಲ್ಲಿರುತ್ತದೆ.

- ರಸ್ತೆ ನಿರ್ಮಾಣದ ಕಾಮಗಾರಿಯು ಟೆಂಡರ್ ಮಂಜೂರಾತಿಯನ್ನು ನವ್ಹೆಂಬರ್–2013 ರಲ್ಲಿ ನೀಡಲಾಗಿದೆ

ಆ)

- ಬಸ್ ನಿಲ್ದಾಣದ ಆವರಣದ ಗೋಡೆ ನಿರ್ಮಾಣದ ಕಾರ್ಯವನ್ನು ಮಾನ್ಯ ನ್ಯಾಯಾಲಯದಿಂದ ನೀಡಿದ ತಡೆಯಾಜ್ಞೆ ತೆರವುಗೊಳಿಸಿದ ಕೂಡಲೇ ಪ್ರಾರಂಭಿಸಲಾಗುವುದು.

- ಆವರಣದ ರಸ್ತೆ ನಿರ್ಮಾಣದ ಕಾರ್ಯವನ್ನು ಇನ್ನು 15 ದಿನಗಳಲ್ಲಿಯೇ ಪ್ರಾರಂಭಿಸಲಾಗುವುದು.

ಇ) ಸದ್ಯಕ್ಕೆ ಪ್ರಸ್ತಾವನೆ ಇರುವುದಿಲ್ಲ